ಕೌಶಲ್ಯ ಅಭಿವೃದ್ಧಿ ಕೇಂದ್ರ ಹಾಗೂ ಕಾರ್ಮಿಕ ಕಲ್ಯಾಣ ಭವನಗಳು

2059(2622); ಶ್ರೀ ಡಾ॥ ಉಮೇಶ್ ಜಿ. ಜಾಧವ್ (ಚಿಂಚೋಳಿ)

ಅ) ಪ್ರಸಕ್ತ ಸಾಲಿನಲ್ಲಿ ಗುಲಬರ್ಗಾ ಜಿಲ್ಲೆ ಚಿಂಚೋಳಿ ತಾಲ್ಲೂಕಿಗೆ ಕೌಶಲ್ಯ ಅಭಿವೃದ್ಧಿ ಕೇಂದ್ರವನ್ನು ಹಾಗೂ ಕಾರ್ಮಿಕ ಕಲ್ಯಾಣ ಭವನಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಯಾವಾಗ ಮಂಜೂರು ಮಾಡಲಾಗುವುದು (ವಿವರ ನೀಡುವುದು)?

ಶ್ರೀ ಪಿ.ಟಿ. ಪರಮೇಶ್ವರ ನಾಯ್ಕ (ಮಾನ್ಯ ಕಾರ್ಮಿಕ ರಾಜ್ಯ ಸಚಿವರು)

ಅ) ಗುಲಬರ್ಗಾ ಜಿಲ್ಲೆ ಚಿಂಚೋಳಿ ತಾಲ್ಲೂಕಿಗೆ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಕಲ್ಯಾಣ ಮಂಡಳಿ ವತಿಯಿಂದ ಕೌಶಲ್ಯ ಅಭಿವೃದ್ಧಿ ಕೇಂದ್ರವನ್ನು ಹಾಗೂ ಕಾರ್ಮಿಕ ಕಲ್ಯಾಣ ಭವನಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಪ್ರಸಕ್ತ ಸಾಲಿನಲ್ಲಿ ಇರುವುದಿಲ್ಲ.

ಆ) ಸದ್ಯಕ್ಕೆ ಪ್ರಸ್ತಾವನೆ ಇರುವುದಿಲ್ಲ.

ಬ್ರಿಡ್ಜ್ ಕಂ-ಬ್ಯಾರೇಜ್ ನಿರ್ಮಾಣ

2060(2751); ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ಬೀದರ್ ಜಿಲ್ಲೆಯ ಔರಾದ್ ತಾಲ್ಲೂಕಿನ ಬಾಲೂರು ಗ್ರಾಮದ ಸಂಪರ್ಕ ರಸ್ತೆಗೆ ಬ್ರಿಡ್ಜ್ ಕಂ ಬ್ಯಾರೇಜ್‌ನ್ನು ಯಾವಾಗ ನಿರ್ಮಿಸಲಾಗಿದೆ;

ಆ) ಇದಕ್ಕೆ ತಗುಲಿದ ಒಟ್ಟಾರೆ ವೆಚ್ಚವೆಷ್ಟು; ಇದರಿಂದ ಈ ಭಾಗದ ಜನರು ಹಾಗೂ ವಿದ್ಯಾರ್ಥಿಗಳಿಗೆ ಅನುಕೂಲವಾಗಿರುವುದು ನಿಜವಲ್ಲವೇ;

ಇ) ಈ ಬ್ರಿಡ್ಜ್ ಕಂ ಬ್ಯಾರೇಜನ್ನು ನಿರ್ಮಿಸಿರುವ ಗುತ್ತಿಗೆದಾರರು ಮತ್ತು ಸಂಸ್ಥೆಗಳ ಹೆಸರು ವಿವರಗಳೇನು;